**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 181 (231)

ಮಾನ್ಯ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 06.07.2023

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ: 01.04.2006 ರಿಂದ ಹೊಸ ಪಿಂಚಣಿ ಸೌಲಭ್ಯವನ್ನು (ಎನ್.ಪಿ.ಎಸ್.) ಜಾರಿಗೆ ತಂದ ನಂತರ ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿಗೆ ಇದುವರೆವಿಗೂ ಪಿಂಚಣಿ ಯೋಜನೆಯ ಖಾತೆಗೆ ಹಣ ಸಂದಾಯವಾಗದೆ, ಆರ್ಥಿಕ ನಷ್ಟಕ್ಕೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ (ವಿ) 209 ಪಿಇಎನ್ 2012, ದಿನಾಂಕ: 21.02.2015ರಲ್ಲಿ ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸಂಘಗಳು, ವಿಶ್ವವಿದ್ಯಾನಿಲಯಗಳು, ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಉದ್ಯೋಗದಾತರ ವಂತಿಗೆಯನ್ನು ತನ್ನ ಸ್ವಂತ ಸಂಪನ್ಮೂಲಗಳಿಂದ ಭರಿಸಿಕೊಳ್ಳುವ ಷರತ್ತಿಗೊಳಪಟ್ಟು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಕಡ್ಡಾಯವಾಗಿ ದಿನಾಂಕ: 01.04.2006 ರಿಂದ ಜಾರಿಗೆ ಬರುವಂತೆ ವಿಸ್ತರಿಸಿ ಆದೇಶಿಸಲಾಗಿದೆ. |
| ಆ) | ಸದರಿ ಯೋಜನೆಯಿಂದ ರಾಜ್ಯ ಸರ್ಕಾರಿ ನೌಕರರಿಗೂ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಇಲ್ಲ |
| ಇ) | ಸದರಿ ಯೋಜನೆಯನ್ನು ರದ್ದುಪಡಿಸಿ, ಹಳೆ ಪಿಂಚಣಿ ಯೋಜನೆಯನ್ನೇ ಜಾರಿಗೆ ತರಬೇಕೆಂದು ನೌಕರರ ಸಂಘಟನೆಗಳು ದೀರ್ಘಕಾಲ ಚಳುವಳಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಹೌದು |
| ಈ) | ಈ ಸಂಬಂಧ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಚಿಂತನೆ ನಡೆಸಿದೆಯೆ; | ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/89/2023, ದಿನಾಂಕ: 01.03.2023ರಲ್ಲಿ ರಾಜ್ಯದಲ್ಲಿ ಜಾರಿ ಇರುವ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ರದ್ದು ಪಡಿಸುವ ಸಂಬಂಧ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಿದೆ. |
| ಉ) | ಹಾಗಾದಲ್ಲಿ, ಯಾವ ಕಾಲಮಿತಿಯಲ್ಲಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗುವುದು? | |

ಆಇ-ಪಿಇಎನ್/ 224 /2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ